# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮೂಡಲಗಿ.

ಸಿ.ಸಿ. ನಂಃ 4116/2023

ಸಿ.ಡಬ್ಲ್ಯೂ- 3
ಪಿ.ಡಬ್ಲ್ಯೂ- 3

**ದಿನಾಂಕಃ 02-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿದಾರರ ಹೆಸರು | : ಆನಂದ ಕಿಚಡಿ |
| ತಂದೆಯ/ಗಂಡನ ಹೆಸರು | : ದೊಡ್ಡಸಾತಪ್ಪ |
| ವಯಸ್ಸು | : 40 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸ ಸ್ಥಳ | : ದುರದುಂಡಿ |
| ತಾಲೂಕು | : ಗೋಕಾಕ |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದ:-**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರ ಮೇಲಿರುವ ತಮ್ಮ ಹೆಬ್ಬಟ್ಟಿನ ಗುರುತುಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ. ಸಾಕ್ಷಿಯು ನಿಪಿ-3 ಮತ್ತು 4 ಭಾವಚಿತ್ರಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸುಮಾರು 3 ವರ್ಷಗಳ ಹಿಂದೆ ಅರಭಾವಿ ಪೆಟ್ರೋಲ ಬಂಕ ಹತ್ತಿರ ನಿಪಿ-2 ದಾಖಲೆಗೆ ನನ್ನ ಸಹಿಯನ್ನು ಮಾಡಿರುತ್ತೇನೆ. ನಿಪಿ-2 ದಾಖಲಾತಿಗೆ ಸಹಿ ಮಾಡಿದ ಸಮಯದಲ್ಲಿ ನಿಪಿ-3 ಮತ್ತು 4 ಭಾವಚಿತ್ರಗಳನ್ನು ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ನನ್ನ ಸಹಿ ತೆಗೆದುಕೊಂಡಿದ್ದಾರೆಂದು ನನಗೆ ತಿಳಿದಿಲ್ಲ. ಮಹಜರ್ ನಲ್ಲಿರುವ ಸಂಗತಿಗಳು ನನಗೆ ತಿಳಿದಿರುವುದಿಲ್ಲ. ನನ್ನ ಮುಂದೆ ಪೊಲೀಸರು ಯಾವುದೇ ವಾಹನವನ್ನು ಜಪ್ತಿಪಡಿಸಿರುವುದಿಲ್ಲ ಮತ್ತು ನೋಡಿದರೆ ಗುರುತಿಸಲಾಗುವುದಿಲ್ಲ.

**(ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯು ನ್ಯಾಯಾಲಯದಲ್ಲಿ ನೀಡಿದ ಹೇಳಿಕೆ ಮತ್ತು ಪೊಲೀಸರ ಮುಂದೆ ನೀಡಿದ ಹೇಳಿಕೆಯನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಅನುಮತಿಯನ್ನು ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ಅವರಿಂದಃ**

ದಿನಾಂಕಃ 26-08-2017 ರಂದು ರಾತ್ರಿ 9 ಗಂಟೆ ಸಮಯದಲ್ಲಿ ಅರಭಾವಿ ಪೆಟ್ರೋಲ ಬಂಕ ಹತ್ತಿರ ಟ್ರಕ ಅಪಘಾತವಾದ ಹಿನ್ನೆಲೆಯಲ್ಲಿ ತನಿಖಾಧಿಕಾರಿ ಕೆ. ವೆಂಕಟಸಾಯಿ ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಮಧ್ಯಾಹ್ನ 2 ರಿಂದ 3 ರವರೆಗೆ ಸ್ಥಳ ಪಂಚನಾಮೆ ಮಾಡಿ, ಕಚ್ಚಾ ನಕ್ಷೆ ತಯಾರಿಸಿ, ಸ್ಥಳದಲ್ಲಿ ನನ್ನ ಮತ್ತು ಚಾಸಾ 2 ರವರ ಸಹಿ ತೆಗೆದುಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ-3 ಮತ್ತು 4

ಭಾವಚಿತ್ರಗಳನ್ನು ಪಂಚನಾಮೆ ಸಮಯದಲ್ಲಿ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ತನಿಖಾಧಿಕಾರಿ ಅಪಘಾತಕ್ಕೆ ಕಾರಣ ಆದ ಟ್ರಕ್ AP 37 TE 9996 ನ್ನು ಪಂಚನಾಮೆ ಸಮಯದಲ್ಲಿ IMV ತಪಾಸಣೆಗಾಗಿ ತಡೆಹಿಡಿದಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ಹಾಜರಿದ್ದು, ಪಂಚನಾಮೆ ವಿಚಾರಗಳನ್ನು ತಿಳಿದುಕೊಂಡು ಸಹಿ ಮಾಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರುವಿಚಾರಣೆಃ ಇರುವುದಿಲ್ಲ.**

ಗಣಕೀಕರಿಸಿ ಓದಿ ಹೇಳಿ ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.

ಪ್ರ. ದ. ನ್ಯಾ ದಂ.,
ಮೂಡಲಗಿ.

# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮೂಡಲಗಿ.

ಸಿ.ಸಿ. ನಂಃ 4116/2023

ಸಿ.ಡಬ್ಲ್ಯೂ- 2
ಪಿ.ಡಬ್ಲ್ಯೂ- 2

**ದಿನಾಂಕಃ 02-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿದಾರರ ಹೆಸರು | : ಮಲ್ಲಪ್ಪ ಸೋಲ್ಲಾಪೂರ |
| ತಂದೆಯ/ಗಂಡನ ಹೆಸರು | : ಸತ್ತೆಪ್ಪ |
| ವಯಸ್ಸು | : 35 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸ ಸ್ಥಳ | : ದುರದುಂಡಿ |
| ತಾಲೂಕು | : ಗೋಕಾಕ |

**<u>ಮುಖ್ಯ ವಿಚಾರಣೆಃ ಮಾನ್ಯ  ಎ.ಪಿ.ಪಿ ರವರಿಂದ:-</u>**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಭಾವಚಿತ್ರಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಸದರಿ ಭಾವಚಿತ್ರಗಳನ್ನು ಕ್ರಮವಾಗಿ ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

ಸುಮಾರು 7 ವರ್ಷಗಳ ಹಿಂದೆ ಅರಭಾವಿ ಪೆಟ್ರೋಲ ಬಂಕ ಹತ್ತಿರ ನಿಪಿ-2 ದಾಖಲೆಗೆ ನನ್ನ ಸಹಿಯನ್ನು ಮಾಡಿರುತ್ತೇನೆ. ನಿಪಿ-2 ದಾಖಲಾತಿಗೆ ಸಹಿ ಮಾಡಿದ ಸಮಯದಲ್ಲಿ ನಿಪಿ-3 ಮತ್ತು 4 ಭಾವಚಿತ್ರಗಳನ್ನು ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ನನ್ನ ಸಹಿ ತೆಗೆದುಕೊಂಡಿದ್ದಾರೆಂದು ನನಗೆ ತಿಳಿದಿಲ್ಲ. ಮಹಜರ್ ನಲ್ಲಿರುವ ಸಂಗತಿಗಳು ನನಗೆ ತಿಳಿದಿರುವುದಿಲ್ಲ. ನನ್ನ ಮುಂದೆ ಪೊಲೀಸರು ಯಾವುದೇ ವಾಹನವನ್ನು ಜಪ್ತಿಪಡಿಸಿರುವುದಿಲ್ಲ ಮತ್ತು ನೋಡಿದರೆ ಗುರುತಿಸಲಾಗುವುದಿಲ್ಲ.

**(ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯು ನ್ಯಾಯಾಲಯದಲ್ಲಿ ನೀಡಿದ ಹೇಳಿಕೆ ಮತ್ತು ಪೊಲೀಸರ ಮುಂದೆ ನೀಡಿದ ಹೇಳಿಕೆಯನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಅನುಮತಿಯನ್ನು ನೀಡಲಾಯಿತು)**

**<u>ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ಅವರಿಂದಃ</u>**

ದಿನಾಂಕಃ 26-08-2017 ರಂದು ರಾತ್ರಿ 9 ಗಂಟೆ ಸಮಯದಲ್ಲಿ ಅರಭಾವಿ ಪೆಟ್ರೋಲ ಬಂಕ ಹತ್ತಿರ ಟ್ರಕ ಅಪಘಾತವಾದ ಹಿನ್ನೆಲೆಯಲ್ಲಿ ತನಿಖಾಧಿಕಾರಿ ಕೆ. ವೆಂಕಟಸಾಯಿ ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಮಧ್ಯಾಹ್ನ 2 ರಿಂದ 3 ರವರೆಗೆ ಸ್ಥಳ ಪಂಚನಾಮೆ ಮಾಡಿ, ಕಚ್ಚಾ ನಕ್ಷೆ ತಯಾರಿಸಿ, ಸ್ಥಳದಲ್ಲಿ ನನ್ನ ಮತ್ತು ಚಾಸಾ 3 ರವರ ಸಹಿ ತೆಗೆದುಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ-3 ಮತ್ತು 4

ಸಿ.ಸಿ. ನಂಃ 4116/2023
ಸಿ.ಡಬ್ಲ್ಯೂ- 2
ಪಿ.ಡಬ್ಲ್ಯೂ- 2

ಭಾವಚಿತ್ರಗಳನ್ನು ಪಂಚನಾಮೆ ಸಮಯದಲ್ಲಿ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ತನಿಖಾಧಿಕಾರಿ ಅಪಘಾತಕ್ಕೆ ಕಾರಣ ಆದ ಟ್ರಕ್ AP 37 TE 9996 ನ್ನು ಪಂಚನಾಮೆ ಸಮಯದಲ್ಲಿ IMV ತಪಾಸಣೆಗಾಗಿ ತಡೆಹಿಡಿದಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ಹಾಜರಿದ್ದು, ಪಂಚನಾಮೆ ವಿಚಾರಗಳನ್ನು ತಿಳಿದುಕೊಂಡು ಸಹಿ ಮಾಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರುವಿಚಾರಣೆಃ ಇರುವುದಿಲ್ಲ.**

ಗಣಕೀಕರಿಸಿ ಓದಿ ಹೇಳಿ ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.

ಪ್ರ. ದ. ನ್ಯಾ ದಂ.,
ಮೂಡಲಗಿ.